



ಅರುಣ ಪಿ. ಭಟ್ಟ

## ವಾರಭವಿಷ್ಯ: 19.01.2023ರಿಂದ 25.01.2023


ಮೇಷ

ಕುಟುಂಬದ ಬಗ್ಗೆ ಹೆಮ್ಮೆ ಪಡುವಂಥ ಬೆಳವಣಿಗೆ ಆಗುತ್ತದೆ. ವಾರದ ಶುರುವಿನಿಂದಲೇ ಉತ್ಸಾಹದಿಂದ ಕಾಣಿಸಿಕೊಳ್ಳುತ್ತೀರಿ. ನಿಮ್ಮ ವೈಯಕ್ತಿಕ ಶ್ರಮದಿಂದ ಹೆಚ್ಚಿನ ಯಶಸ್ಸು ಪಡೆಯಲು ಸಾಧ್ಯವಾಗುತ್ತದೆ. ಆ ಕಾರಣಕ್ಕಾಗಿ ಹಲವು ಕೆಲಸ– ಕಾರ್ಯಗಳನ್ನು ಪೂರೈಸಲಾಗುತ್ತದೆ. ನಿಮ್ಮ ಸಹೋದ್ಯೋಗಿಗಳ ಭಿನ್ನಾಭಿಪ್ರಾಯಗಳನ್ನು ಮರೆಯಲು ಪ್ರಯತ್ನ ಮಾಡುತ್ತೀರಿ. ಶುಭದಿನ 21. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.


ವೃಷಭ

ಶುಭ ಕಾರ್ಯವನ್ನು ಆಯೋಜಿಸುವ ಸಾಧ್ಯತೆ ಇದೆ. ಈ ಅವಧಿಯಲ್ಲಿ ಅತಿ ಮುಖ್ಯವಾದ ಕೆಲಸಗಳನ್ನು ಮಾಡಿಕೊಂಡು ಬಿಡಿ. ಯಾವುದೇ ವ್ಯವಹಾರ, ಒಪ್ಪಂದ, ಭೇಟಿ ಕೆಲಸಗಳಲ್ಲಿ ಯಶಸ್ಸು ಕಾಣಬಹುದು. ಉದ್ಯೋಗ ಸ್ಥಳದಲ್ಲಿ ನಿಮ್ಮ ಗೌರವ ಹೆಚ್ಚುವ ಸಾಧ್ಯತೆ ಇದೆ. ಬಾಕಿ ಇರುವ ಹಲವು ಕೆಲಸಗಳನ್ನು ಪೂರ್ಣಗೊಳಿಸುತ್ತೀರಿ. ಶುಭದಿನ 19. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.


ಮಿಥುನ

ಆರೋಗ್ಯ ಸುಧಾರಿಸುವುದು. ಅಕಸ್ಮಾತ ಖರ್ಚು ಸಂಭವ. ಆಸ್ತಿ ಖರೀದಿ ಬಗ್ಗೆ ಚಿಂತನೆ. ಕಲಾವಿದರಿಗೆ ಸಾಹಿತಿಗಳಿಗೆ ಉತ್ತಮ ಅವಕಾಶ. ಸಂಘ ಸಂಸ್ಥೆಗಳಿಂದ ಧನಲಾಭ. ಶತ್ರುಗಳು ಹಿಂದೆ ಸರಿಯುವರು. ವೃತ್ತಿ ವ್ಯವಹಾರದಲ್ಲಿ ಲಾಭ ವ್ಯಾವಹಾರಿಕ ಅನುಕೂಲತೆ. ಸರಕಾರಿ ಕೆಲಸ ಶೀಘ್ರವಾಗುವುದು. ತಂದೆ– ತಾಯಿಯವರ ಆರೋಗ್ಯ ಸುಧಾರಣೆಯಾಗುವುದು. ಶುಭದಿನ 20. ಚಂಡಿ ಪಾರಾಯಣ ಮಾಡಿರಿ.


ಕಟಕ

ನವೋಲ್ಲಾಸ ಬರುವುದು. ದಾನ ಧರ್ಮಕ್ಕಾಗಿ ಹಣವನ್ನು ಖರ್ಚು ಮಾಡುತ್ತೀರಿ. ಮಿತ್ರರಿಗೆ ಸಹಾಯ ಹಸ್ತ ಚಾಚುತ್ತೀರಿ. ವ್ಯಾಪಾರದಲ್ಲಿ ಅಧಿಕ ಲಾಭ. ಹಳೆಯ ಮಿತ್ರರ ಆಗಮನ. ಹಲವು ದಿನಗಳ ಸಮಸ್ಯೆ ಬಗೆಹರಿಯುವುದು. ಹೊಟ್ಟೆನೋವಿನ ಕಾಟ ನಿಮ್ಮನ್ನು ಬಾಧಿಸಬಹುದು. ಮಕ್ಕಳಿಂದ ಶುಭವಾರ್ತೆ. ಮಹತ್ವದ ಕಾಗದ ಪತ್ರಗಳ ರಕ್ಷಣೆ. ಸಹೋದರರ ಸಹಾಯ. ಶುಭದಿನ 22. ಶಿವ ಕವಚ ಓದಿರಿ.


ಸಿಂಹ

ಕುಟುಂಬ ಸದಸ್ಯರ ಜತೆಗೆ ಹೆಚ್ಚಿನ ಸಮಯ ಕಳೆಯುವ ಸಾಧ್ಯತೆ ಇದೆ. ಈ ವಾರ ಹೆಚ್ಚು ಚಟುವಟಿಕೆಯಿಂದ ನೀವು ಇರಬೇಕಾಗುತ್ತದೆ. ಭೂ ವ್ಯಾಜ್ಯವೊಂದಕ್ಕೆ ಶ್ರಮ ಹಾಕಲಿದ್ದೀರಿ. ಆದರೆ ವಿರೋಧಿ ಪಾಳಯದವರು ಈ ವಿಚಾರದಲ್ಲಿ ಇನ್ನಷ್ಟು ಸಮಸ್ಯೆಗೆ ಎಳೆಯಲಿದ್ದಾರೆ. ಕಾನೂನಿಗೆ ಸಂಬಂಧಿಸಿದ ವಿಚಾರಗಳಲ್ಲಿ ತೊಡಗಿಕೊಳ್ಳಬೇಕಾದ ಅಗತ್ಯ ಕಂಡುಬರುತ್ತದೆ. ಶುಭದಿನ 25. ಸೌಂದರ್ಯಲಹರಿ ಪಠಿಸಿರಿ.


ಕನ್ಯಾ

ತಾಂತ್ರಿಕ ಜ್ಞಾನವನ್ನು ಹೆಚ್ಚಿಸಿಕೊಳ್ಳಲು ಹಲವು ವ್ಯಕ್ತಿಗಳ ಪರಿಚಯ ಆಗುತ್ತದೆ. ನಿಮ್ಮಲ್ಲಿ ಆಗುತ್ತಿರುವ ಸಕಾರಾತ್ಮಕ ಪರಿಣಾಮ ಅನುಭವಕ್ಕೆ ಬರುತ್ತದೆ. ಸಂಗಾತಿ ಜತೆಗೆ ಇದನ್ನು ಹಂಚಿಕೊಳ್ಳುತ್ತೀರಿ. ಕುಟುಂಬದೊಳಗೆ ಸಂತಸದ ವಾತಾವರಣ ಇರುತ್ತದೆ. ಈವರೆಗಿನ ನಿಮ್ಮ ಆದಾಯ ಹೆಚ್ಚಾಗಲಿದೆ. ನಿಮ್ಮ ಹಣವನ್ನು ಸರಿಯಾಗಿ ವಿನಿಯೋಗಿಸಲು ಯಶಸ್ಸು ಸಾಧಿಸುತ್ತೀರಿ. ಶುಭದಿನ 23. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.


ತುಲಾ

ಈ ವಾರ ವೈಯಕ್ತಿಕ ಹಾಗೂ ವೃತ್ತಿಪರ ಬದುಕಿನಲ್ಲಿ ಲಾಭ. ಮನೆಗೆ ಎಲೆಕ್ಟ್ರಾನಿಕ್ ವಸ್ತುಗಳ ಖರೀದಿ ಮಾಡಲಿದ್ದೀರಿ. ಸಿನಿಮಾ, ವೈದ್ಯಕೀಯ, ಕಲೆ ಈ ರೀತಿಯ ವೃತ್ತಿಯಲಿ ಇರುವವರಿಗೆ ಅತ್ಯುತ್ತಮವಾದ ಲಾಭ ಇದೆ. ಸೇವಾ ವಲಯದಲ್ಲಿ ಕಾರ್ಯ ನಿರ್ವಹಿಸುವವರಿಗೆ ಪ್ರತಿಭೆಯನ್ನು ಪ್ರದರ್ಶಿಸಲು ಹಾಗೂ ಬಡ್ತಿ ಪಡೆಯಲು ಅತ್ಯುತ್ತಮ ಅವಕಾಶಗಳಿವೆ. ಶುಭದಿನ 22. ದೇವ್ಯಪರಾದ ಕ್ಷಮಾಪನಾ ಸ್ತೋತ್ರ ಪಠಿಸಿರಿ.


ವೃಶ್ಚಿಕ

ಬಹಳ ಮುಖ್ಯವಾದ ಪಟ್ಟಿಯೊಂದನ್ನು ಸಿದ್ಧ ಮಾಡಿಕೊಳ್ಳುವುದಕ್ಕೆ ವಾರದ ಶುರುವಿನಲ್ಲಿ ಸಿದ್ಧರಾಗುತ್ತೀರಿ. ಕೆಲವು ವಿಚಾರಗಳು ಕಣ್ತಪ್ಪಿನಿಂದ ಬಿಟ್ಟು ಹೋಗುವ ಸಾಧ್ಯತೆ ಇದೆ. ಇದರಿಂದ ಹಿರಿಯ ಅಧಿಕಾರಿಗಳು ಬೇಸರಿಸಿಕೊಳ್ಳುತ್ತಾರೆ. ಈ ಅವಧಿಯಲ್ಲಿ ತಾಳ್ಮೆ ಮತ್ತು ಧೈರ್ಯ ಬಹಳ ಮುಖ್ಯವಾಗುತ್ತದೆ. ಮುಖ್ಯವಾಗಿ ಸಮಯದ ಕೊರತೆ ವಿಪರೀತವಾಗಿ ಕಾಡುತ್ತದೆ. ಶುಭದಿನ 24. ಶ್ರೀ ದುರ್ಗಾಪಾರಾಯಣ ಮಾಡಿರಿ.


ಧನಸ್ಸು

ಆಸ್ತಿ ಖರೀದಿಗೆ ಪ್ರಯತ್ನಿಸುತ್ತಿರುವವರು ಸಂಬಂಧಪಟ್ಟ ಕಾಗದಪತ್ರಗಳನ್ನು ಕೂಲಂಕಷ ಪರಿಶೀಲನೆ ನಡೆಸಲಿದ್ದೀರಿ. ದೊಡ್ಡ ಪ್ರಮಾದಗಳನ್ನು ತಡೆಯುವಂತೆ ಸನ್ನಿವೇಶಗಳು ನಿಮಗೆ ಪೂರಕ ಆಗಲಿವೆ. ವೈಯಕ್ತಿಕ ಸಂಬಂಧದಲ್ಲಿ ಕೆಲವು ಕಹಿ ಬೆಳವಣಿಗೆಗಳು ಆಗಲಿವೆ. ವಾರದ ಅಂತ್ಯಕ್ಕೆ ಸರಿಯುತ್ತಾ ಕುಟುಂಬದವರ ಬೆಂಬಲ ದೊರೆಯಲಿದೆ. ಬಾಂಧವ್ಯ ಗಟ್ಟಿಯಾಗುತ್ತದೆ. ಶುಭದಿನ 21. ಶ್ರೀ ವೆಂಕಟೇಶ್ವರ ಸ್ತೋತ್ರ ಪಠಿಸಿರಿ.


ಮಕರ

ವಾರದ ಶುರುವಿನಲ್ಲೇ ವ್ಯಾಪಾರ ಉದ್ಯಮದಲ್ಲಿ ಪ್ರಗತಿ. ಉದ್ಯಮ ವಿಸ್ತರಣೆ ಬಗ್ಗೆ ಮುಖ್ಯವಾದ ತೀರ್ಮಾನವನ್ನು ಕೈಗೊಳ್ಳಲಿದ್ದೀರಿ. ವೈವಾಹಿಕ ಜೀವನ ಸಂತೋಷದಾಯಕವಾಗಿ ಇರುತ್ತದೆ. ವಾರದ ಮಧ್ಯಭಾಗದಲ್ಲಿ ಉದ್ಯೋಗ ನಿಮಿತ್ತವಾಗಿ ಪ್ರಯಾಣ ಮಾಡಬೇಕಾಗುತ್ತದೆ. ವಾರದ ಅಂತ್ಯಕ್ಕೆ ಸರಿಯುತ್ತಾ ತಾಂತ್ರಿಕ ಜ್ಞಾನ ಹೆಚ್ಚಿಸಿಕೊಳ್ಳುವ ಅವಕಾಶ ದೊರೆಯುತ್ತದೆ. ಶುಭದಿನ 21. ಕಾಲಭೈರವನ ಸೇವೆ ಮಾಡಿರಿ.


ಕುಂಭ

ನಿಮ್ಮ ಹಣದ ಸದುಪಯೋಗ ಮಾಡಿಕೊಳ್ಳುವ ಬಗ್ಗೆ ಯೋಜನೆ ರೂಪಿಸಲಿದ್ದೀರಿ. ಮಾರಾಟ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಲಾಭ ಪಡೆಯಲು ಅತ್ಯುತ್ತಮ ಅವಕಾಶಗಳಿವೆ. ನೀವು ಹಾಕಿಕೊಂಡ ಗುರಿಯನ್ನು ಅಂದುಕೊಂಡ ಸಮಯಕ್ಕಿಂತ ಮುಂಚಿತವಾಗಿಯೇ ತಲುಪುವ ಎಲ್ಲ ಸಾಧ್ಯತೆಗಳಿವೆ. ಸಂಗಾತಿಯ ಭಾವನೆಗಳಿಗೆ ಗೌರವ ನೀಡುತ್ತೀರಿ. ಶುಭದಿನ 24. ಗಣಪತಿಗೆ ದೂರ್ವಾರ್ಚನೆ ಮಾಡಿರಿ.


ಮೀನ

ವಾರದ ಆರಂಭದಲ್ಲಿ ಉನ್ನತ ಶಿಕ್ಷಣಕ್ಕೆ ಯತ್ನಿಸುತ್ತಿರುವವರಿಗೆ ಯಶಸ್ಸು ದೊರೆಯುತ್ತದೆ. ಈ ಅವಧಿಯಲ್ಲಿ ದೇವತಾ ಆರಾಧನೆಗೆ ನಿಮ್ಮ ಶ್ರಮ ಹಾಕುತ್ತೀರಿ. ಬಹಳ ಒತ್ತಡ ಹಾಕಿ ನಿಮ್ಮಿಂದ ಕೆಲಸ ತೆಗೆಸುವ ಯತ್ನಗಳಾಗುತ್ತವೆ. ಉದ್ಯೋಗ ಸ್ಥಳದಲ್ಲಿ ಭಾವನಾತ್ಮಕವಾಗಿ ಕೆಲವು ನಿರ್ಧಾರಗಳನ್ನು ತೆಗೆದುಕೊಳ್ಳಲಿದ್ದೀರಿ. ಆದಾಯ ಅನುಕೂಲಕರವಾಗಿ ಇರಲಿದೆ. ಶುಭದಿನ 21. ಕನಕಧಾರಾ ಸ್ತೋತ್ರ ಪಠಣಮಾಡಿರಿ.